**ಕರ್ನಾಟಕ ವಿಧಾನ ಪರಿಷತ್ತು**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 533 (721)**

**ಸದಸ್ಯರ ಹೆಸರು : ಶ್ರೀ ಡಾ|| ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)**

**ಉತ್ತರಿಸಬೇಕಾದ ದಿನಾಂಕ : 11.12.2023**

**ಉತ್ತರಿಸಬೇಕಾದ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿಕ್ಷಕರ ಕಲ್ಯಾಣ ನಿಧಿಯಿಂದ ಸರ್ಕಾರ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ಸಹ ಪಠ್ಯ ಚಟುವಟಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ) | ಸರ್ಕಾರಿ ಶಾಲಾ ಶಿಕ್ಷಕರಿಗೆ ನಡೆಸುವ ಸಹ ಪಠ್ಯ ಚಟುವಟಿಕೆಗಳನ್ನು ಅನುದಾನಿತ ಶಾಲಾ ಶಿಕ್ಷಕರಿಗೆ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; | ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಕಛೇರಿಯ ಸುತ್ತೋಲೆ ಸಂಖ್ಯೆ: ಸಿಬ್ಬಂದಿ-2(2)/ಸಹಪಠ್ಯ-ಚಟುವಟಿಕೆ/01/2023-24, ದಿನಾಂಕ: 31.10.2023 ರಲ್ಲಿ 2023-24ನೇ ಸಾಲಿಗೆ ಸುತ್ತೋಲೆ ಹೊರಡಿಸಲಾಗಿದ್ದು, ಈ ಸುತ್ತೋಲೆಯಲ್ಲಿ ಸರ್ಕಾರಿ/ಅನುದಾನಿತ ಮತ್ತು ಅನುದಾನ ರಹಿತ (ಮಾನ್ಯತೆ ಪಡೆದ) ಶಾಲಾ ಶಿಕ್ಷಕರಿಗೆ ಸಹಪಠ್ಯ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. (ಪ್ರತಿ ಅನುಬಂಧದಲ್ಲಿರಿಸಿದೆ) |
| ಇ) | ಇದ್ದಲ್ಲಿ, ಯಾವಾಗ ವಿಸ್ತರಿಸಲಾಗುವುದು; ಇಲ್ಲದಿದ್ದರೆ ಕಾರಣಗಳೇನು ? | |

**ಸಂಖ್ಯೆ: ಇಪಿ 52 ಪಿಎಂಎ 2023.**

**(ಎಸ್. ಮಧು ಬಂಗಾರಪ್ಪ)**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಕಾರ್ಯದರ್ಶಿ-ಖಜಾಂಚಿಗಳ ಕಛೇರಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು-560002.

ಸಂಖ್ಯೆ: ಸಿಬ್ಬಂದಿ-2(2)/ಸಹಪಠ್ಯ-ಚಟುವಟಿಕೆ/01/2023-24 ದಿನಾಂಕ: 31-10-2023

**ಸುತ್ತೋಲೆ**

ವಿಷಯ:- 2023-24ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳನ್ನು ನಡೆಸುವ ಬಗ್ಗೆ.

** *** **

ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ 2023-24ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಪ್ರತ್ಯೇಕವಾಗಿ ನಡೆಸಲಾಗುವ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳನ್ನು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲು ತಾಲ್ಲೂಕು ಮಟ್ಟಕ್ಕೆ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ರೂ.57,700/- ಅನುಬಂಧ-1 ರಂತೆ ಮತ್ತು ಜಿಲ್ಲಾ ಮಟ್ಟಕ್ಕೆ ತಾಲ್ಲೂಕುಗಳ ಸಂಖ್ಯೆಗಳ ಆಧಾರದ ಮೇರೆಗೆ ಉಪನಿರ್ದೇಶಕರು (ಆಡಳಿತ) ರವರಿಗೆ (ಅನುಬಂಧ-1(ಎ)ರಲ್ಲಿ ವಿವರಿಸಿರುವಂತೆ) ಆಯೋಜನಾ ವೆಚ್ಚವನ್ನು ಬಿಡುಗಡೆ ಮಾಡಲಾಗಿದೆ. ಸ್ಪರ್ಧೆಗಳನ್ನು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕೆಳಗಿನ ವೇಳಾಪಟ್ಟಿಯಂತೆ ನಡೆಸಿ ವಿಜೇತರಾದ ಶಿಕ್ಷಕರಿಗೆ ಪ್ರತ್ಯೇಕ ಪ್ರಶಸ್ತಿ ಪತ್ರಗಳನ್ನು, ನಗದು ಬಹುಮಾನವನ್ನು ವಿತರಿಸುವುದು.

**2023-24ನೇ ಸಾಲಿನಲ್ಲಿ ನಡೆಸಬೇಕಾದ ಸಹ-ಪಠ್ಯ ಚಟುವಟಿಕೆ ಸ್ಪರ್ಧೆಗಳ ವೇಳಾಪಟ್ಟಿ :**

| ಹಂತಗಳು | ಸ್ಪರ್ಧೆಗಳನ್ನು ನಡೆಸುವ ದಿನಾಂಕ | ಸ್ಪರ್ಧೆಗಳನ್ನು ಆಯೋಜಿಸುವ ಜವಾಬ್ದಾರಿ | ವಿಜೇತರ ಪಟ್ಟಿಯನ್ನು ಸಲ್ಲಿಸುವ ಅಂತಿಮ ದಿನಾಂಕ |
|---|---|---|---|
| ತಾಲ್ಲೂಕು ಮಟ್ಟದ ಸ್ಪರ್ಧೆಗಳು | 16-11-2023 | ಆಯಾ ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳು | ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾದ ಶಿಕ್ಷಕರ ಪಟ್ಟಿಯನ್ನು ಜಿಲ್ಲಾ ಉಪನಿರ್ದೇಶಕರಿಗೆ ಕಳುಹಿಸಲು ಅಂತಿಮ ದಿನಾಂಕ: **20-11-2023** |
| ಜಿಲ್ಲಾ ಮಟ್ಟದ ಸ್ಪರ್ಧೆಗಳು | 29-11-2023 | ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) | ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಶಿಕ್ಷಕರ ಪಟ್ಟಿಯನ್ನು ನಿಧಿಗಳ ಕಛೇರಿಗೆ ಕಳುಹಿಸಲು ಅಂತಿಮ ದಿನಾಂಕ: **05-12-2023** |
| ರಾಜ್ಯ ಮಟ್ಟದ ಸ್ಪರ್ಧೆಗಳು | ದಿನಾಂಕವನ್ನುನಂತರ ತಿಳಿಸಲಾಗುವುದು | ಉಪನಿರ್ದೇಶಕರು ಹಾಗೂ ಪ್ರಭಾರಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಬೆಂಗಳೂರು. | |

ಸರ್ಕಾರದಿಂದ ಮಾನ್ಯತೆ ಹೊಂದಿರುವ ಎಲ್ಲಾ ಶಿಕ್ಷಣ ಸಂಸ್ಥೆಗಳ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಒಬ್ಬ ಶಿಕ್ಷಕರು ಒಂದು ಸ್ಪರ್ಧೆಯಲ್ಲಿ ಮಾತ್ರ ಭಾಗವಹಿಸಬಹುದು ಪ್ರಥಮ ಸ್ಥಾನ ಪಡೆದ ಶಿಕ್ಷಕರು ಮಾತ್ರ ಮುಂದಿನ ಹಂತಕ್ಕೆ ಅರ್ಹರಾಗುತ್ತಾರೆ.

2023-24ನೇ ಸಾಲಿನ ಸಹಪಠ್ಯ ಚಟುವಟಿಕೆಗಳ ಸುತ್ತೋಲೆ ಸ್ವೀಕರಿಸಿದ ಕೂಡಲೇ ಎಲ್ಲಾ ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರು ನೋಡಲ್ ಅಧಿಕಾರಿಗಳನ್ನು ನೇಮಿಸಿ ಸಭೆ ನಡೆಸುವುದು. ಸ್ಪರ್ಧೆಗಳಿಗೆ ಸಂಬಂಧಿಸಿದ ಎಲ್ಲಾ ಕಾರ್ಯಗಳನ್ನು ವ್ಯವಸ್ಥಿತವಾಗಿ ಪ್ರಾರಂಭಿಸಲು/ನಿರ್ವಹಿಸಲು ಜ್ಞಾಪನಾ ನೀಡುವುದು. ಏನಾದರೂ ಸಮಸ್ಯೆಗಳಿದ್ದಲ್ಲಿ ಪ್ರಾರಂಭದ ಹಂತದಲ್ಲೇ ಚರ್ಚಿಸಿ ಪರಿಹಾರ ಕಂಡುಕೊಳ್ಳುವುದು. ಸ್ಪರ್ಧೆಗಳನ್ನು ನಿಧಿಗಳ ವತಿಯಿಂದ ನಿಗದಿಪಡಿಸಿರುವ ವೇಳಾಪಟ್ಟಿಯಂತೆ ಕಡ್ಡಾಯವಾಗಿ ಪೂರ್ಣಗೊಳಿಸುವುದು ಹಾಗೂ ವಿಜೇತ ಶಿಕ್ಷಕರ ಪಟ್ಟಿಯನ್ನು ಸಲ್ಲಿಸುವುದು. ಜಿಲ್ಲಾ ಉಪನಿರ್ದೇಶಕರು ತಮ್ಮ ವ್ಯಾಪ್ತಿಯ ತಾಲ್ಲೂಕುವಾರು ನೋಡಲ್ ಅಧಿಕಾರಿಗಳ ವಿವರ, ದೂರವಾಣಿ ಸಂಖ್ಯೆಯನ್ನು ನಿಧಿಗಳ ಕಛೇರಿಗೆ ಈ ಸುತ್ತೋಲೆ ತಲುಪಿದ ಒಂದು ವಾರದೊಳಗೆ ಕಡ್ಡಾಯವಾಗಿ ಕಳುಹಿಸಲು ತಿಳಿಸಿದೆ.

ತಾಲ್ಲೂಕು ಮತ್ತು ಜಿಲ್ಲಾ ಹಂತದ ಸ್ಪರ್ಧೆಗಳನ್ನು ಆಯೋಜಿಸುವವರು ಸಹ-ಪಠ್ಯ ಚಟುವಟಿಕೆ ಸ್ಪರ್ಧೆಗಳು ನಡೆಯುವ ದಿನಾಂಕ, ಸ್ಥಳ ಮತ್ತು ವೇಳಾಪಟ್ಟಿ ನೀಡಿ, ಕಛೇರಿಯ ಸೂಚನಾಫಲಕದಲ್ಲಿ ಮತ್ತು ಸ್ಥಳೀಯ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಕಟಣೆ ನೀಡುವುದು. ಶಿಕ್ಷಣ ಸಂಯೋಜಕರು ಮತ್ತು ಸಿ.ಆರ್.ಪಿ ರವರ ಮುಖಾಂತರ ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳ ಶಿಕ್ಷಕರಿಗೂ ಸಕಾಲಕ್ಕೆ ಮಾಹಿತಿ ನೀಡುವುದು. (ಸ್ಪರ್ಧೆಗಳ ವಿವರಗಳಿಗೆ ಅನುಬಂಧ-3ನ್ನು ನೋಡಿ). ಶಿಕ್ಷಕರ ಪ್ರತಿಭೆಗಳನ್ನು ಗುರುತಿಸಲು ನಡೆಸಲಾಗುತ್ತಿರುವ **ಎಲ್ಲಾ ಸ್ಪರ್ಧೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ/ಅನುದಾನಿತ ಹಾಗೂ ಮಾನ್ಯತೆ ಪಡೆದ ಎಲ್ಲಾ ಸಂಸ್ಥೆಯ ಶಿಕ್ಷಕರು ಪಾಲ್ಗೊಳ್ಳುವಂತೆ ಅಗತ್ಯ ಕ್ರಮವಹಿಸುವುದು.** ಹಾಗೂ ನೀಡಲಾದ ವೇಳಾ ಪಟ್ಟಿಯಂತೆ ಸ್ಪರ್ಧೆಗಳನ್ನು ನಡೆಸುವುದು. ತಾಲ್ಲೂಕು ಮಟ್ಟದ ವಿಜೇತರಿಗೆ ನಗದು ಬಹುಮಾನ ನೀಡಲಾಗುವುದು ಎಂಬ ಮಾಹಿತಿಯನ್ನು ಎಲ್ಲಾ ಶಿಕ್ಷಕರಿಗೆ ನೀಡುವುದು.

ಸ್ಪರ್ಧೆಗಳನ್ನು ನಡೆಸುವ ಮುನ್ನ ಸೂಕ್ತವಾದ ಹಾಗೂ ಅನುಭವಿ ತೀರ್ಪುಗಾರರನ್ನು ಆಯ್ಕೆ ಮಾಡುವುದು. ತೀರ್ಪುಗಾರರನ್ನು ಆಯ್ಕೆ ಮಾಡುವಾಗ ಆಯಾ ವಿಷಯಗಳಲ್ಲಿ ಪರಿಣಿತಿ ಪಡೆದಿರುವ ವ್ಯಕ್ತಿಗಳನ್ನು ಆಯ್ಕೆ ಮಾಡುವುದು. ನಿರ್ಣಯಕ್ಕೆ ಅನುಸರಿಸಲಾಗುವ ಮಾನದಂಡಗಳನ್ನು ಕಾರ್ಯಕ್ರಮಕ್ಕೆ ಪೂರ್ವದಲ್ಲಿ ಪ್ರಕಟಣೆ ಮಾಡುವುದು. ಮೂವರು ತೀರ್ಪುಗಾರರು ನೀಡುವ ಅಂಕಗಳ ಸರಾಸರಿಯ ಆಧಾರದ ಮೇಲೆ ವಿಜೇತರನ್ನು ಆಯ್ಕೆ ಮಾಡಬೇಕು ಹಾಗೂ ತಾಲ್ಲೂಕು ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ವಿಜೇತರಾದ ಶಿಕ್ಷಕರಿಗೆ ಪ್ರಶಸ್ತಿ. ಪತ್ರ ಮತ್ತು ನಗದು ಬಹುಮಾನವನ್ನು ಕಾರ್ಯಕ್ರಮದ ದಿನವೇ ವಿತರಿಸಬೇಕು.

ತಾಲ್ಲೂಕು ಹಂತದಲ್ಲಿ ಆಯ್ಕೆ ಆದ ವಿಜೇತರ ಪಟ್ಟಿಯನ್ನು ಪೂರ್ಣ ವಿಳಾಸದೊಂದಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಜಿಲ್ಲೆಯ ಉಪನಿರ್ದೇಶಕರು(ಆಡಳಿತ) ಇವರಿಗೆ ಅನುಬಂಧ-2(ಎ) ಮತ್ತು ಅನುಬಂಧ-2(ಬಿ)ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿ ಮಾತ್ರ ಭರ್ತಿ ಮಾಡಿ ನಿಗದಿ ಪಡಿಸಿರುವ ವೇಳೆಗೆ ಸಲ್ಲಿಸತಕ್ಕದ್ದು, ಜಿಲ್ಲಾ ಮಟ್ಟದಲ್ಲಿ ಆಯ್ಕೆ ಆದ ವಿಜೇತರ ಪಟ್ಟಿಯನ್ನು ಸುತ್ತೋಲೆಯಲ್ಲಿ ತಿಳಿಸಿರುವಂತೆ ರಾಜ್ಯ ಮಟ್ಟದ ಕಾರ್ಯಕ್ರಮವನ್ನು ಆಯೋಜಿಸುವ ಉಪನಿರ್ದೇಶಕರು(ಆಡಳಿತ) ಇವರಿಗೆ ಕಳುಹಿಸತಕ್ಕದ್ದು ಯಾವುದೇ ಕಾರಣಕ್ಕೂ ಸ್ಪರ್ಧೆಗಳು ನಿಗದಿತ ಅವದಿ ಮೀರಿ ನೆಡೆಸಬಾರದು ಈ ರೀತಿ ಆಗಿದ್ದಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರುಗಳು ಪೂರ್ಣ ಜವಬ್ದಾರಾಗಿರುತ್ತಾರೆ. ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುವುದು.

ನಿಗದಿತ ದಿನಾಂಕದೊಳಗೆ ಬಿಡುಗಡೆ ಮಾಡಿದ ಮೊತ್ತಕ್ಕೆ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು. ಮೂಲ ವೋಚರ್‌ಗಳನ್ನು ತಮ್ಮ ಕಛೇರಿಯಲ್ಲಿ ಉಳಿಸಿಕೊಂಡು ತಪಾಸಣೆಗೆ ಮೇಲಾಧಿಕಾರಿಗಳು ಬಂದಾಗ ಕಡ್ಡಾಯವಾಗಿ ಹಾಜರುಪಡಿಸುವುದು. ಹಾಗೂ ಉಪಯೋಗಿತ ಪ್ರಮಾಣ ಪತ್ರವನ್ನು ಮಾತ್ರ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಸಹಪಠ್ಯ ಚಟುವಟಿಕೆಗಳ ಆಯೋಜನಾ ವೆಚ್ಚಕ್ಕಾಗಿ ಬಿಡುಗಡೆ ಮಾಡಲಾಗಿರುವ ಮೊತ್ತದಲ್ಲಿ ಉಳಿತಾಯವಾದ ಹಣವನ್ನು ಈ ಕೆಳಕಂಡ ಖಾತೆಗೆ ನೆಫ್ಟ್ ಮೂಲಕ ಜಮಾ ಮಾಡಿ ಈ ಕಛೇರಿಗೆ ಜಮಾ ಮಾಡಿದ ಬಗ್ಗೆ ದಾಖಲೆ ಸಮೇತ ವರದಿ ಸಲ್ಲಿಸುವುದು.

| | | |
|---|---|---|
| 1 | Name of the Bank | State Bank of India, Mysore Bank circle Branch, Bangalore. |
| 2 | Name of the Account | Secretary / Treasurer, KSTBF |
| 3 | Saving Bank Account Number | 54051197813 |
| 4 | IFSC Code | SBIN0040007 |

ಪ್ರತಿ ವರ್ಷ ಸ್ಪರ್ಧೆಗಳ ಪೈಕಿ ಗಾಯನ ಸ್ಪರ್ಧೆಯನ್ನು ಸಹ ಒಂದು ಸ್ಪರ್ಧೆಯನ್ನಾಗಿ ನಡೆಸಲಾಗುತ್ತಿದೆ. ಈ ಸ್ಪರ್ಧೆಯಡಿಯಲ್ಲಿ ಪ್ರಸ್ತುತ ನಡೆಸುತ್ತಿರುವ ಭಾವಗೀತೆ, ಜಾನಪದಗೀತೆ ಮತ್ತು ಭಕ್ತಿಗೀತೆಗಳು ಬೇರೆ ಬೇರೆ ಪ್ರಕಾರಗಳಾಗಿರುವುದರಿಂದ ವಿಜೇತರನ್ನು ಆಯ್ಕೆ ಮಾಡಲು ಒಂದೇ ಮಾನದಂಡಗಳು/ನಿಯಮಗಳ ಮೂಲಕ ಮೌಲ್ಯ ಮಾಪನ ಮಾಡಲು ತೀರ್ಪುಗಾರರಿಗೆ ಸಮಸ್ಯೆಯಾಗುತ್ತಿದೆ. ಹಾಗಾಗಿ ಮೂರು ಪ್ರಕಾರಗಳ ಪೈಕಿ ಒಂದು ವರ್ಷಕ್ಕೆ ಒಂದು ಪ್ರಕಾರವನ್ನು ಮಾತ್ರ ಸ್ಪರ್ಧೆಗೆ ನೀಡಲು ತೀರ್ಮಾನಿಸಲಾಗಿದೆ. ಅದರಂತೆ **2018-19ನೇ ಸಾಲಿಗೆ ಜನಪದಗೀತೆ ಸ್ಪರ್ಧೆಯನ್ನು ನಡೆಸಲಾಗಿದೆ. 2019-20ನೇ ಸಾಲಿಗೆ ಭಾವಗೀತೆ,** ಹಾಗೂ 2022--23ನೇ ಸಾಲಿಗೆ ಭಕ್ತಿಗೀತೆ ಸ್ಪರ್ಧೆಗಳನ್ನು ನಡೆಸಲಾಗಿದೆ ನಂತರದ ವರ್ಷಗಳಲ್ಲಿ ಪುನ: ಜನಪದಗೀತೆ, ಭಾವಗೀತೆ, ಭಕ್ತಿಗೀತೆಗಳು ಕ್ರಮವಾಗಿ ಪುನರಾವರ್ತನೆಯಾಗುವುದರಿಂದ **2023-24ನೇ** ಸಾಲಿಗೆ ಜನಪದಗೀತೆಯನ್ನು ಆಯ್ಕೆ ಮಾಡಲಾಗಿದೆ. ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು ಸಂಬಂಧಿಸಿದವರಿಗೆ ವ್ಯಾಪಕ ಪ್ರಚಾರ ನೀಡತಕ್ಕದ್ದು. ತಾಲ್ಲೂಕು/ಜಿಲ್ಲಾ ಮಟ್ಟದ ಆಶುಭಾಷಣ, ಪ್ರಬಂಧ, ಚಿತ್ರ ಬರೆಯುವುದು, ರಸಪ್ರಶ್ನೆ ಸ್ಪರ್ಧೆಗಳಿಗೆ ವಿಷಯವನ್ನು/ಪ್ರಶ್ನೆಗಳನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು/ಉಪನಿರ್ದೇಶಕರು ರವರ ಹಂತದಲ್ಲೇ ನಿರ್ಧರಿಸುವುದು, ಗೌಪ್ಯತೆ ಕಾಪಾಡಿಕೊಂಡು ಸ್ಪರ್ಧೆಗಳನ್ನು ನಡೆಸುವುದು.

ವಿಶೇಷ ಸೂಚನೆ:- ನಿಧಿಗಳ ಕಛೇರಿಯ ವತಿಯಿಂದ ಇದುವರೆವಿಗೆ ನಡೆಸಲಾಗಿರುವ ರಾಜ್ಯ ಮಟ್ಟದ ಸಹ-ಪಠ್ಯ ಚಟುವಟಿಕೆಗಳ ಸ್ಪರ್ಧೆಗಳಲ್ಲಿ ಯಾವುದೇ ಶಿಕ್ಷಕರು ಒಂದು ಬಾರಿಯಾದರೂ ಪ್ರಥಮ ಸ್ಥಾನ ಗಳಿಸಿದ್ದಲ್ಲಿ, ಅದೇ ಶಿಕ್ಷಕರು ಪುನ: ಅದೇ ಸ್ಪರ್ಧೆಯಲ್ಲಿ ತಾಲ್ಲೂಕು ಮಟ್ಟದಿಂದ ರಾಜ್ಯ ಮಟ್ಟದವರೆಗೆ ಭಾಗವಹಿಸಲು ಅವಕಾಶವಿರುವುದಿಲ್ಲ. ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧೆಯನ್ನು ಹೊರತುಪಡಿಸಿ ಬೇರೆ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಈ ಬಗ್ಗೆ ತಾಲ್ಲೂಕುಮಟ್ಟದ ಅಧಿಕಾರಿಗಳು ಶಾಲಾ ಮುಖ್ಯಸ್ಥರಿಗೆ/ ಶಿಕ್ಷಕರಿಗೆ/ ತೀರ್ಪುಗಾರರಿಗೆ ಸೂಕ್ತ ತಿಳುವಳಿಕೆ ನೀಡುವುದು.

ಹೆಚ್ಚಿನ ಮಾಹಿತಿಗಾಗಿ ನಿಧಿ ಕಛೇರಿಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ **ಶ್ರೀಮತಿ. ಬಿ.ಹೆಚ್. ಕುಸುಮ,** ಇವರನ್ನು ಸಂಪರ್ಕಿಸಬಹುದು.

ಮೊಬೈಲ್ ಸಂಖ್ಯೆ 8880421889

(ಬಿ.ಬಿ. ಕಾವೇರಿ., ಭಾ.ಆ.ಸೇ)
ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ,
ಹಾಗೂ ಕಾರ್ಯದರ್ಶಿ/ಖಜಾಂಚಿಗಳು
ಶಿಕ್ಷಕರ ಕಲ್ಯಾಣ ನಿಧಿ, ಬೆಂಗಳೂರು.

ಪ್ರತಿಯನ್ನು:

1. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಧಾರವಾಡ/ಕಲಬುರಗಿ ರವರ ಮಾಹಿತಿಗಾಗಿ.
2. ಸಹನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು/ಮೈಸೂರು/ಬೆಳಗಾಂ ಕಲಬುರಗಿ ರವರ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.